ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ. ಎಂ. ಎಲ್. ಅನಿಲ್ ಕುಮಾರ್ ಇವರು ನಿಯಮ 330 ರಡಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ.

ವಿಷಯ:

2022 ರ ಫೆಬ್ರವರಿ ತಿಂಗಳ ಕೊನೆಯ ವಾರ ರಷ್ಯಾ ಮತ್ತು ಉಕ್ರೇನ್ ಮಧ್ಯೆ ಯುದ್ಧ ನಡೆದಿತ್ತು. ಉಕ್ರೇನ್ ಮೇಲೆ ರಷ್ಯಾ ಭೀಕರ ದಾಳಿ ಮಾಡಿದ್ದರಿಂದ ಉಕ್ರೇನ್‌ನಲ್ಲಿ ಭಾರತ ದೇಶದ ವಿದ್ಯಾರ್ಥಿಗಳೂ ಸಿಲುಕಿದ್ದರು. ಆ ಪೈಕಿ ವೈದ್ಯಕೀಯ ವಿದ್ಯಾಭ್ಯಾಸ ಮಾಡಲು ಹೋದ ವಿದ್ಯಾರ್ಥಿಗಳೇ ಹೆಚ್ಚಿದ್ದರು. ಕರ್ನಾಟಕದಿಂದ ಮೆಡಿಕಲ್ ಸ್ಟಡೀಸ್‌ಗೆ ಹೋಗಿ ಸಿಲುಕಿದ್ದ ವಿದ್ಯಾರ್ಥಿಗಳನ್ನು ಕೇಂದ್ರ ಸರ್ಕಾರ ಸುರಕ್ಷಿತವಾಗಿ ಕರೆ ತಂದಿತ್ತು, ಪ್ರಾಣಾಪಾಯದಿಂದ ಪಾರಾಗಿ ಬಂದೆವಲ್ಲಾ ಎಂಬ ಖುಷಿಯ ಜೊತೆಗೆ ಮೆಡಿಕಲ್ ಸ್ಟಡೀಸ್ ಮೊಟಕಾಯಿತೆಂದು ವಿದ್ಯಾರ್ಥಿಗಳು ಬೇಸರವಾಗಿರುತ್ತಾರೆ. ದೇಶದ ಬೇರೆ ಬೇರೆ ರಾಜ್ಯಗಳಲ್ಲಿ ಸರ್ಕಾರವು ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮಾಡಲು ಸಹಾಯ ಮಾಡಿದ್ದು, ಕರ್ನಾಟಕ ಸರ್ಕಾರವು ಉಕ್ರೇನ್‌ನಿಂದ ವಾಪಾಸ್ಸಾದ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮಾಡಲು ಕ್ರಮ ಕೈಗೊಂಡಿರುವ ಕುರಿತು.

ಉತ್ತರ:

ಯುದ್ಧ ಪೀಡಿತವಾಗಿದ್ದ ಉಕ್ರೇನ್‌ನಿಂದ ವೈದ್ಯಕೀಯ ವಿದ್ಯಾಭ್ಯಾಸ ಮೊಟಕುಗೊಳಿಸಿ ಅಂದಾಜು 700 ವಿದ್ಯಾರ್ಥಿಗಳು ಕರ್ನಾಟಕ ರಾಜ್ಯಕ್ಕೆ ಮರಳಿ ಬಂದಿರುತ್ತಾರೆ. ವೈದ್ಯಕೀಯ ಶಿಕ್ಷಣವನ್ನು ಮೊಟಕುಗೊಳಿಸಿ ರಾಜ್ಯಕ್ಕೆ ಹಿಂದಿರುಗಿರುವ ವಿದ್ಯಾರ್ಥಿಗಳಿಗೆ ಅವರ ಶಿಕ್ಷಣವನ್ನು ಮುಂದುವರೆಸಲು ಸನ್ಮಾನ್ಯ ಮುಖ್ಯಮಂತ್ರಿಯವರೊಂದಿಗೆ ಮಾನ್ಯ ಆರೋಗ್ಯ ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಚರ್ಚಿಸಿರುತ್ತಾರೆ. ಉಕ್ರೇನ್ ಯುದ್ಧದ ಪರಿಣಾಮವಾಗಿ ವ್ಯಾಸಂಗವನ್ನು ಮೊಟಕುಗೊಳಿಸಿ ಸ್ವದೇಶಕ್ಕೆ ವಾಪಸ್ಸಾದ ವೈದ್ಯಕೀಯ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಶೀಲಿಸಲು ಹಾಗೂ ಸಮಸ್ಯೆಗಳಿಗೆ ಸೂಕ್ತ ಪರಿಹಾರವನ್ನು ನೀಡುವ ನಿಟ್ಟಿನಲ್ಲಿ ಸಲಹೆಗಳನ್ನು ನೀಡಲು ಮಾನ್ಯ ಉಪ ಕುಲಪತಿಗಳು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿತ್ತು.

ಆದರೆ ವೈದ್ಯಕೀಯ ಶಿಕ್ಷಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ವೈದ್ಯಕೀಯ ಆಯೋಗ(NMC) ನಮ್ಮ ರಾಷ್ಟ್ರದಲ್ಲಿ ವೈದ್ಯಕೀಯ ಶಿಕ್ಷಣ ನೀತಿಯನ್ನು ರೂಪಿಸುವ ಅಗ್ರಮಾನ್ಯ ಶಾಸನಬದ್ಧ ಸಂಸ್ಥೆಯಾಗಿದೆ. ಉಕ್ರೇನ್‌ನಿಂದ ವೈದ್ಯಕೀಯ ವಿದ್ಯಾಭ್ಯಾಸ ಮೊಟಕುಗೊಳಿಸಿ ರಾಜ್ಯಕ್ಕೆ ಹಿಂತಿರುಗಿರುವ ಪ್ರಕರಣಗಳು ಕರ್ನಾಟಕ ರಾಜ್ಯದಲ್ಲಿ ಮಾತ್ರವಲ್ಲದೇ, ಭಾರತದ ಇತರ ರಾಜ್ಯಗಳ ವಿದ್ಯಾರ್ಥಿಗಳನ್ನು ಸಹ ಒಳಗೊಂಡಿರುವ ಕಾರಣ ಸದರಿ ಸಂಸ್ಥೆಯು ಈ ವಿಷಯದಲ್ಲಿ ಏಕರೂಪದ

ನೀತಿಯನ್ನು ಕೈಗೊಳ್ಳಬೇಕಾಗಿರುತ್ತದೆ. ಇದೊಂದು ವಿಶೇಷ ಸಂದರ್ಭವಾಗಿದ್ದು, ಈ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರವು ಅವಶ್ಯಕ ಕ್ರಮ ಕೈಗೊಳ್ಳುವ ಬಗ್ಗೆ ವಿದ್ಯಾರ್ಥಿಗಳೊಂದಿಗೆ ಸಂವಾದವನ್ನು ನಡೆಸಿ ಹಾಗೂ ಕ್ಷೇತ್ರ ಪರಿಣಿತರೊಂದಿಗೆ ಚರ್ಚಿಸಿ ರಾಷ್ಟ್ರೀಯ ವೈದ್ಯಕೀಯ ಆಯೋಗವು ನೀಡುವ ಸೂಚನೆಗಳನ್ನು ನಿರೀಕ್ಷಿಸಲಾಗುತ್ತಿದೆ. ರಾಷ್ಟ್ರೀಯ ವೈದ್ಯಕೀಯ ಆಯೋಗವು ನೀಡುವ ಸೂಚನೆಗಳನುಸಾರ ಅಗತ್ಯ ಕ್ರಮವಹಿಸಲಾಗುವುದು.

ರಾಷ್ಟೀಯ ವೈದ್ಯಕೀಯ ಆಯೋಗವು ದಿನಾಂಕ:15.09.2022 ರ ಸಾರ್ವಜನಿಕ ಸೂಚನೆ ಹೊರಡಿಸಿ ಉಕ್ರೇನ್‌ನಲ್ಲಿ ವ್ಯಾಸಂಗ ಮೊಟಕುಗೊಳಿಸಿರುವ ಭಾರತೀಯ ವೈದ್ಯಕೀಯ ವಿದ್ಯಾರ್ಥಿಗಳು ಶೈಕ್ಷಣಿಕ ಚಲನಾಶೀಲತೆಗಾಗಿ ತಾತ್ಕಾಲಿಕವಾಗಿ ಹೊರದೇಶಗಳಾದ Poland, Austria, Czech Republic, France, Georgia, Kazakhstan, Lithuania, Moldova, Slovakia, Spain, Uzbekistan, US, Italy, Belgium, Egypt, Latvia, Kyrgyzstan, Greece, Rumania, Sweden, Israel, Iran, Azerbaijan, Bulgaria, Germany, Turkey, Croatia and Hungary ಇಲ್ಲಿ ವ್ಯಾಸಂಗ ಮುಗಿಸಿ ಮಾತೃ ಸಂಸ್ಥೆ ಉಕ್ರೇನ್ ವಿಶ್ವವಿದ್ಯಾಲಯದಲ್ಲಿ ಪದವಿಯನ್ನು ಪಡೆಯಬಹುದಾಗಿದೆ ಎಂದು ತಿಳಿಸಿ ಮೊಬಿಲಿಟಿ ಕಾರ್ಯಕ್ರಮವನ್ನು ಅಳವಡಿಸಿಕೊಳ್ಳಲು ಸಲಹೆ ನೀಡಲಾಗಿದೆ.

No: MED 123 RGU 2022

(ಡಾ:ಕೆ.ಸುಧಾಕರ್)
ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ
ಮತ್ತು ಕುಟುಂಬ ಕಲ್ಯಾಣ ಸಚಿವರು

C-36